ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಕೇಂದ್ರ ಸರ್ಕಾರದ ``ಜಲ ಜೀವನ ಮಿಷನ್'' ಯೋಜನೆಯನ್ನು ರಾಜ್ಯದಲ್ಲಿ ಜಾರಿಗೊಳಿಸಿರುವ ಬಗ್ಗೆ

ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು):-

490(395) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೇಂದ್ರ ಪುರಸ್ಕೃತ ``ಜಲ ಜೀವನ್ ಮಿಷನ್'' ಯೋಜನೆಯಡಿಯಲ್ಲಿ ಮನೆ ಮನೆಗೆ ನಲ್ಲಿ ಅಳಡಿಸುವ ಯೋಜನೆ ರಾಜ್ಯದಲ್ಲಿ ಜಾರಿಯಲ್ಲಿದೆಯೇ ;

(ಆ) ಇದುವರೆವಿಗೂ ಗ್ರಾಮೀಣ ಪ್ರದೇಶಗಳಲ್ಲಿನ ಎಷ್ಟು ಮನೆಗಳಿಗೆ ನಲ್ಲಿಗಳನ್ನು ಅಳವಡಿಸಲಾಗಿದೆ ;

(ಇ) ಈ ಯೋಜನೆಯಡಿ ಶುದ್ಧ ನೀರು ಪಡೆದ ಮನೆಗಳ ಸಂಖ್ಯೆ ಎಷ್ಟು; ಇದಕ್ಕೆ ತಗುಲಿದ ವೆಚ್ಚ ಎಷ್ಟು; ನಿಗಧಿಪಡಿಸಿಕೊಂಡಿರುವ ಗುರಿ ಎಷ್ಟು ? (ವಿವರಗಳನ್ನು ಒಸಗಿಸುವುದು)